## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎಸ್.ಬಿ.ರವಿಕುಮಾರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಹಿರೇಕೆರೂರು, ಇವರ ವಿರುದ್ಧದ ಇಲಾಖಾ ವಿಚಾರಣೆ- ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಯವರ ನೇಮಕ ಮಾಡುವ ಬಗ್ಗೆ ಆದೇಶ.

ಓದಲಾಗಿದೆ:-1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಹಾವೇರಿ, ಇವರ ಪತ್ರಸಂಖ್ಯೆ:ಹಾಜಿಪಂ/ಆಡಳಿತ-2/ಇವಿ-4/2014-15/7124, ದಿನಾಂಕ: 22.11.2014.

2. ಸರ್ಕಾರದ ಸಮ ಸಂಖ್ಯೆಯ ಕಾರಣ ಕೇಳುವ ನೋಟೀಸ್ ದಿನಾಂಕ:16.05.2015

3. ಶ್ರೀ ಎಸ್.ಬಿ.ರವಿಕುಮಾರ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಹಿರೇಕೆರೂರು, ರವರ ಲಿಖಿತ ರಕ್ಷಣಾ ಹೇಳಿಕೆ ದಿನಾಂಕ: 20.06.2015

****

**ಪ್ರಸ್ತಾವನೆ:**

2009-10 ಮತ್ತು 2010-11ನೇ ಸಾಲಿನಲ್ಲಿ ಹಾವೇರಿ ಜಿಲ್ಲೆಯ ಹಿರೇಕೆರೂರು ತಾಲ್ಲೂಕಿನಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ನಿರ್ವಹಿಸಿದ ಕಾಮಗಾರಿಗಳ ಸ್ಥಳದಲ್ಲಿ ನಾಮಫಲಕ ಅಳವಡಿಸುವ ಕುರಿತು ರೂ. 2.52.ಲಕ್ಷ ಮೊತ್ತಕ್ಕೆ ಟೆಂಡರ್ ಕರೆಯದೆ ನಾಮಫಲಕಗಳನ್ನು ಖರೀದಿಸಿದ್ದು, ಇದು ಸ್ಪರ್ಧಾತ್ಮಕ ಬೆಲೆಗಳ ಲಾಭದಿಂದ ವಂಚಿತಗೊಳಿಸಿದಂತಾಗುತ್ತದೆ ಎಂದು ಮಹಾಲೇಖಪಾಲರು, ಸಿ.ಎ.ಜಿ. ಆಡಿಟ್ ವರದಿಯ ಕಂಡಿಕೆ 2.2.5.4 ರ ಪ್ರಕಾರ ಆಕ್ಷೇಪಣೆಯನ್ನು ವ್ಯಕ್ತಪಡಿಸಿದ್ದು, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯ ಪಾರದರ್ಶಕ ಅಧಿನಿಯಮ 1999ರ ಪ್ರಕಾರ ರೂ. 1.00 ಲಕ್ಷಕ್ಕೆ ಮೀರಿದ ಖರೀದಿಗಳನ್ನು ಟೆಂಡರ್ ಆಧಾರದ ಮೇಲೆ ಖರೀದಿಸಬೇಕಾಗಿದ್ದು, ಈ ಯೋಜನೆಯಡಿ ಕಾಮಗಾರಿಗಳನ್ನು ಗ್ರಾಮ ಪಂಚಾಯಿತಿಯಿಂದ ಅನುಷ್ಠಾನಗೊಳಿಸುತ್ತಿದ್ದು, ನಾಮಫಲಕಗಳ ಸರಬರಾಜು ಬಗ್ಗೆ ಗ್ರಾಮ ಪಂಚಾಯತಿಯ ಹೆಸರಿನಲ್ಲಿ ಬಿಲ್ಲುಗಳನ್ನು ನೀಡಿದ್ದಾಗ್ಯೂ, ತಾಲ್ಲೂಕು ಪಂಚಾಯತಿಯಿಂದ ಹಣ ಪಾವತಿ ಮಾಡಿರುವುದು ಈ ಯೋಜನೆಯ ಹಣಕಾಸಿನ ವ್ಯವಹರಣೆಗೆ ನಿಯಮಬಾಹಿರವಾಗಿದ್ದು, ಹಾಗೂ ಮಾರ್ಗಸೂಚನೆಯ ಸ್ಪಷ್ಟ ಉಲ್ಲಂಘನೆ ಆಗಿದ್ದ ಕಾರಣ, ಹಾಗೂ ಹಿರೇಕೆರೂರು ತಾಲ್ಲೂಕು ಪಂಚಾಯತಿ ವ್ಯಾಪ್ತಿಯ ಅಲದಗೇರಿ ಗ್ರಾಮ ಪಂಚಾಯತಿಯಲ್ಲಿ ಸ್ವೀಕರಿಸಿದ್ದ, 1045 ಅರ್ಜಿಗಳ ಎದುರಾಗಿ 1403 ಉದ್ಯೋಗ ಚೀಟಿಗಳನ್ನು ವಿತರಿಸಿರುವ ಬಗ್ಗೆ ಸದರಿ ಲೆಕ್ಕ ಪರಿಶೋಧನಾ

ವರದಿಯ ಕಂಡಿಕೆ.2.2.4.2 ರಲ್ಲಿ ಆಕ್ಷೇಪಣೆಯನ್ನು ವ್ಯಕ್ತಪಡಿಸಿರುವ ಹಾಗೂ ಇನ್ನಿತರೆ ಆರೋಪಗಳಿಗೆ ಸಂಬಂಧಿಸಿದಂತೆ, ಹಾವೇರಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಹಿರೇಕೆರೂರು ತಾಲ್ಲೂಕು ಪಂಚಾಯತ್‌ನಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಎಸ್.ಬಿ.ರವಿಕುಮಾರ್, ಇವರಿಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರನ್ವಯ ದೋಷಾರೋಪಣ ಪಟ್ಟಿಯೊಂದಿಗೆ ಕಾರಣ ಕೇಳುವ ನೋಟಿಸನ್ನು ಮೇಲೆ (2) ರಲ್ಲಿ ಓದಲಾದಂತೆ ಜಾರಿ ಮಾಡಲಾಗಿತ್ತು. ಇದಕ್ಕೆ ಅಧಿಕಾರಿಯು ಮೇಲೆ ಓದಲಾದ(3) ರಲ್ಲಿ ಅವರ ಲಿಖಿತ ಹೇಳಿಕೆಯನ್ನು ಸಲ್ಲಿಸಿ, ಅವರ ವಿರುದ್ಧದ ಎಲ್ಲಾ ಆರೋಪಗಳನ್ನು ಅಲ್ಲಗಳೆಯುತ್ತಾ, ತಮ್ಮ ಮೇಲಿನ ಉದ್ದೇಶಿತ ಇಲಾಖಾ ವಿಚಾರಣೆಯನ್ನು ಕೈಬಿಡುವಂತೆ ಕೋರಿರುತ್ತಾರೆ.

ಸರ್ಕಾರವು ಆಪಾದಿತ ಅಧಿಕಾರಿಯು ಸಲ್ಲಿಸಿರುವ ಹೇಳಿಕೆಯಲ್ಲಿನ ಅಂಶಗಳ ಬಗ್ಗೆ ಪರಿಶೀಲಿಸಿದ್ದು, ಅಧಿಕಾರಿಯ ವಿರುದ್ಧ ಆರೋಪಗಳನ್ನು ಕೈಬಿಡಲು ಸಕಾರಣ/ಸಮಂಜಸ/ತೃಪ್ತಿಕರವಾಗಿಲ್ಲದೆ ಇರುವುದರಿಂದ, ಅಧಿಕಾರಿ ವಿರುದ್ಧದ ಆರೋಪಗಳ ಸತ್ಯಾಸತ್ಯೆಯನ್ನು ತಿಳಿಯಲು ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸಲು, ಸರ್ಕಾರವು ತೀರ್ಮಾನಿಸಿದೆ.

ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 93 ವಿಸೇಬಿ 2015 ಬೆಂಗಳೂರು**
**ದಿನಾಂಕ:24-11-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಹಿರೇಕೆರೂರು ತಾಲ್ಲೂಕು ಪಂಚಾಯತಿಯಲ್ಲಿ ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ, ಶ್ರೀ ಎಸ್.ಬಿ.ರವಿಕುಮಾರ್, (ಪ್ರಸ್ತುತ ಯೋಜನಾ ನಿರ್ದೇಶಕರು, ಡಿ.ಆರ್.ಡಿ.ಎ.ಕೋಶ, ಜಿಲ್ಲಾ ಪಂಚಾಯತ್, ಶಿವಮೊಗ್ಗ) ಇವರ ವಿರುದ್ಧ ದಿನಾಂಕ: 16.05.2015ರ ಕಾರಣ ಕೇಳುವ ನೋಟಿಸಿನೊಂದಿಗೆ ಜಾರಿಮಾಡಲಾದ ದೋಷಾರೋಪಣ ಪಟ್ಟಿಯಲ್ಲಿ ಮಾಡಿರುವ ಆರೋಪಗಳ ಸಂಬಂಧ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ), ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ)ರ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಲು, ಸದರಿ ನಿಯಮಾವಳಿಗಳ ನಿಯಮ -11 (2) ರನ್ವಯ ಶ್ರೀಫ.ಸಿ.ಗುಡ್ಡಾಕಾರ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಅದೇ ನಿಯಮಾವಳಿಗಳ ನಿಯಮ-11(5)(ಸಿ)ರ ಪ್ರಕಾರ ಸಹಾಯಕ ಕಾರ್ಯದರ್ಶಿ, (ಆಡಳಿತ) ಜಿಲ್ಲಾ ಪಂಚಾಯತ್, ಹಾವೇರಿ, ಇವರನ್ನು ಮಂಡನಾಧಿಕಾರಿಯನ್ನಾಗಿ ಸರ್ಕಾರವು ನೇಮಿಸಿದೆ.

ವಿಚಾರಣಾಧಿಕಾರಿಯವರು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ), ನಿಯಮಾವಳಿಗಳು-1957ರ ನಿಯಮ-11ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನ ಅನುಸರಿಸಿ ವಿಚಾರಣೆ ಜರುಗಿಸಿ ವಿಚಾರಣಾ ವರದಿಯನ್ನು ಅವಶ್ಯಕ ದಾಖಲಾತಿಗಳೊಂದಿಗೆ, ಮೂರು ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ವಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ/ಶಿವಮೊಗ್ಗ
3) ಶ್ರೀ ಫ.ಸಿ.ಗುಡ್ಡಾಕಾರ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಧಾರವಾಡ,
4) ಸಹಾಯಕ ಕಾರ್ಯದರ್ಶಿ,(ಆಡಳಿತ) ಜಿಲ್ಲಾ ಪಂಚಾಯತ್, ಹಾವೇರಿ ಜಿಲ್ಲೆ.

ಪ್ರತಿ ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.